ಆ) 8ನೇ ಪಂಚವಾರ್ಷಿಕ ಯೋಜನೆಯ ಅವಧಿಯ ಅಂತ್ಯದವರೆಗೆ ರಾಜ್ಯದಲ್ಲಿ ಯಾವುದೇ ಹೊಸ ಶಿಕ್ಷಕರ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲು ಅನುಮತಿಯನ್ನು ನೀಡಬಾರದೆಂಬುದು ಸರ್ಕಾರದ ನೀತಿಯಾಗಿರುತ್ತದೆ. ಅಲ್ಲದೆ ಕರ್ನಾಟಕ ಮಾನ್ಯತೆ ಪಡೆಯದ ಮತ್ತು ಸಂಯೋಜಿತವಾಗಿಲ್ಲದ ಶಿಕ್ಷಣಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ಅಧಿನಿಯಮ 1992 (ಸಂ : 7: 1993ರ) ಪ್ರಕಾರ ಅನಧಿಕೃತ ಶಿಕ್ಷಕರ ತರಭೇತಿಯಕೇಂದ್ರಗಳಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಕೂರಿಸಲು ಸಾಧ್ಯವಾಗುವುದಿಲ್ಲ.

ಅಂತಹ ಅನಧಿಕೃತ ಶಿಕ್ಷಕರ ತರಭೇತಿ ಕೇಂದ್ರಗಳ ವಿರುದ್ಧ ನಿಯಮಗಳ ಪ್ರಕಾರ ಕ್ರಮವನ್ನು ತೆಗೆದುಕೊಳ್ಳಲಾಗುತ್ತಿದೆ.

ಹೊಸದುರ್ಗ ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳಿಗೆ ವೈದ್ಯರುಗಳನ್ನು ನೇಮಕಮಾಡುವ ಬಗ್ಗೆ

920 - ಶ್ರೀ ಟಿ.ಹೆಚ್. ಬಸವರಾಜ್ (ಹೊಸದುರ್ಗ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದುರ್ಗ ನಗರ ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇದೆಯೇ?

ಆ) ಹಾಗಿದ್ದಲ್ಲಿ ಸದರಿ ಹುದ್ದೆಗಳನ್ನು ತುಂಬಲು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು

ಆ) ದಿನಾಂಕ 10-2-95ರ ಅಧಿಸೂಚನೆಯಲ್ಲಿ 2 ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ಪ್ರಾಥಮಿಕ ಆರೋಗ್ಯ ಕೇಂದ್ರ ಕೆ.ಕೆ. ಪುರ ಹಾಗೂ ಜಿ.ಎಸ್.ಪುರ ಇಲ್ಲಿಗೆ ನೇಮಕ ಮಾಡಲಾಗಿದೆ. ಇನ್ನುಳಿದ ಹುದ್ದೆಗಳಿಗೆ ಸಾರ್ವತ್ರಿಕ ವರ್ಗಾವಣೆಯ ಸಮಯದಲ್ಲಿ ತುಂಬಲು ಕ್ರಮ ಕೈಗೊಳ್ಳಲಾಗುವುದು.

ಹೊಸದುರ್ಗ ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞರ ಕೊರತೆ ಕುರಿತು

920ಎ - ಶ್ರೀ ಟಿ.ಹೆಚ್. ಬಸವರಾಜ್ (ಹೊಸದುರ್ಗ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದುರ್ಗ ನಗರದಲ್ಲಿ ಇರುವ ಸರ್ಕಾರಿ ಆಸ್ಪತ್ರೆಯಲ್ಲಿ ತಜ್ಞರ ಕೊರತೆ ಇದೆಯೇ? ಹಾಗಿದ್ದಲ್ಲಿ ಯಾವ ತಜ್ಞರ ಕೊರತೆ ಇದೆ?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು

ಕೊರತೆ ಇರುವ ತಜ್ಞರು

ಅ) ವೈದ್ಯಕೀಯ

ಆ) ಸರ್ಜರಿ

ಇ) ಮಕ್ಕಳ ತಜ್ಞತೆ

ಈ) ಅರವಳಿಕೆ